ಚುಕ್ಕೆ ರಹಿತ ದಿನಾಂಕ 29.03.2022 69

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಅರುಣ ಶಹಾಪುರ ಇವರ ನಿಯಮ-72ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಉತ್ತರ**

**ಪ್ರಶ್ನೆ**

ದಿನಾಂಕ:01/08/2008ರ ನಂತರ ನೇಮಕವಾದ ಪ್ರೌಢ ಶಾಲಾ ಶಿಕ್ಷಕರು, ಮುಖ್ಯ ಗುರುಗಳು; ಅನುದಾನಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರುಗಳಿಗೆ ನ್ಯಾಯಾಲಯದ ಆದೇಶದಂತೆ ಒಂದು ವೇತನ ಬಡ್ತಿಯನ್ನು ನಿಡುವ ಕುರಿತು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ**

ಸರ್ಕಾರದ ಆದೇಶ ಸಂಖ್ಯೆ: ಆಇ 8 ಎಸ್‌ಆರ್‌ಪಿ 2006 ದಿನಾಂಕ:29/03/2006ರಲ್ಲಿ 5ನೇ ರಾಜ್ಯ ವೇತನ ಆಯೋಗದ ಮಧ್ಯಂತರ ವರದಿಯಲ್ಲಿ ಮಾಡಿರುವ ಶಿಫಾರಸ್ಸಿನನ್ವಯ ಅನುದಾನಿತ ಮತ್ತು ಸ್ಥಳೀಯ ಸಂಸ್ಥೆಗಳ ಪ್ರಾಥಮಿಕ ಶಾಲಾ ಶಿಕ್ಷಕರು ಸೇರಿದಂತೆ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಮಾಸಿಕ ರೂ 200/ಗಳ ವಿಶೇಷ ಭತ್ಯೆಯನ್ನು ಮಂಜೂರು ಮಡಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ ಆಇ 14 ಎಸ್‌ಆರ್‌ಪಿ 2006, ದಿನಾಂಕ:12/05/2006ರಲ್ಲಿ ಅನುದಾನಿತ ಶಿಕ್ಷಣ ಸಂಸ್ಥೆಗಳ ಮತ್ತು ಸ್ಥಳೀಯ ಸಂಸ್ಥೆಗಳ ಪ್ರೌಢಶಾಲಾ ಶಿಕ್ಷಕರೂ ಸೇರಿದಂತೆ ರಾಜ್ಯ ಪ್ರೌಢಶಾಲಾ ಶಿಕ್ಷಕರಿಗೆ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಮತ್ತು ಸ್ಥಳೀಯ ಸಂಸ್ಥೆಗಳ ಪದವಿಪೂರ್ವ ಕಾಲೇಜಿನ ಉಪನ್ಯಾಸಕರು ಸೇರಿದಂತೆ ಪದವಿಪೂರ್ವ ಕಾಲೇಜಿನ ಉಪನ್ಯಾಸಕರುಗಳಿಗೆ ಮಾಸಿಕ ರೂ.200/ಗಳ ವಿಶೇಷ ಭತ್ಯೆನ್ನು ಮಧ್ಯಂತರ ಪರಿಹಾರವಾಗಿ ದಿನಾಂಕ:01/04/2006ರಿಂದ ಜಾರಿಗೆ ಬರುವಂತೆ ಮಂಜೂರು ಮಾಡಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಆಇ 31 ಎಸ್‌ಆರ್‌ಪಿ 2007, ದಿನಾಂಕ:29/08/2008ರಲ್ಲಿ ಸರ್ಕಾರದ ಆದೇಶ ಸಂಖ್ಯೆ:ಆಇ 31 ಎಸ್‌ಆರ್‌ಪಿ 2007 ರ ದಿನಾಂಕ:29/08/2008ರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರಿಗೆ ರೂ. 6800-13000ನ್ನು ನೀಡಿರುವುದರಿಂದ ಅವರುಗಳು ರೂ.6250/-ಗಳ ಬದಲಾಗಿ ರೂ.6800/-ಗಳ ಪ್ರಾರಂಭಿಕ ವೇತನಕ್ಕೆ ಅರ್ಹರಾಗುವುದರಿಂದ ದಿನಾಂಕ:01/08/2008ರಂದು ಅಥವಾ ನಂತರ ನೇಮಕಾತಿ ಹೊಂದಿದ ಪ್ರಾಥಮಿಕ ಶಾಲಾ ಶಿಕ್ಷಕರು ಆದೇಶ ಸಂಖ್ಯೆ: ಆಇ 8 ಎಸ್‌ಆರ್‌ಪಿ 2006, ದಿನಾಂಕ:29/03/2006ರಲ್ಲಿ ಮಂಜೂರು ಮಾಡಿರುವ ಮಾಸಿಕ ರೂ.200/-ಗಳ ವಿಶೇಷ ಭತ್ಯೆಯನ್ನು ಪಡೆಯಲು ಅರ್ಹರಿರುವುದಿಲ್ಲವೆಂದು ಆದೇಶಿಸಲಾಗಿದೆ.

ಕೆ.ಎ.ಟಿ ಅರ್ಜಿ ಸಂಖ್ಯೆ:4412-4428, 4430-4444, 4446-4464, 4467-5224/2020 ಶ್ರೀ. ಲಕ್ಷ್ಮೀನಾರಾಯಣ ಭಟ್ ಮತ್ತಿತರರು, ಈ ಪ್ರಕರಣದಲ್ಲಿ ದಿನಾಂಕ:05/05/2021ರಂದು ನೀಡಿರುವ ತೀರ್ಪಿನಲ್ಲಿ ದಿನಾಂಕ:01/08/2008ರ ನಂತರ ನೇಮಕಾತಿ ಹೊಂದಿರುವ ಸರ್ಕಾರಿ ಪ್ರೌಢಶಾಲಾ ಶಿಕ್ಷಕರಿಗೆ ವಿಶೇಷ ಭತ್ಯೆ ನೀಡುವಂತೆ ತೀರ್ಪು ನೀಡಿರುತ್ತದೆ.

ದಿನಾಂಕ:01/08/2008ರ ನಂತರ ನೇಮಕಾತಿ ಹೊಂದಿದ ಸಹ ಶಿಕ್ಷಕರುಗಳಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ನಿಯಮಗಳಲ್ಲಿ ಅವಕಾಶವಿಲ್ಲದಿರುವುದರಿಂದ ಸದರಿ ತೀರ್ಪಿನ ವಿರುದ್ಧ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ದಾಖಲಿಸಲು ಕ್ರಮವಹಿಸಲಾಗುತ್ತಿದೆ

ಇಪಿ 41 ಎಸ್‌ಎಲ್‌ಬಿ 2022.

(ಬಿ.ಸಿ ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು.